**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 29–11–2021**

## ಮಾಧ್ಯಮ ಸಂಸ್ಥೆಗಳ ಗಮನಕ್ಕೆ

ಡಿಸೆಂಬರ್ 13 ರಿಂದ ಡಿಸೆಂಬರ್ 24 ರ ವರೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯಲಿರುವ ರಾಜ್ಯ ವಿಧಾನ ಮಂಡಲದ ಚಳಿಗಾಲದ ಅಧಿವೇಶನದ ವರದಿಗಾಗಿ ತಮ್ಮ ಮಾಧ್ಯಮ ಸಂಸ್ಥೆಯಿಂದ ನಿಯೋಜಿಸಲಾಗುವ ವರದಿಗಾರರು ಹಾಗೂ ಛಾಯಾಗ್ರಾಹಕರ ವಿವರಗಳನ್ನು ಡಿಸೆಂಬರ್ 1 ರ ಸಂಜೆ 5:00 ಗಂಟೆಯೊಳಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಸಲ್ಲಿಸಲು ಕೋರಿದೆ.

| ಕ್ರಸಂ | ಹೆಸರು/ಪದನಾಮ | ಸಂಪರ್ಕ ಸಂಖ್ಯೆ | ಮಾಧ್ಯಮ ಸಂಸ್ಥೆ ಹೆಸರು/ವಿಳಾಸ/ದೂರವಾಣಿ | ಮನೆ ವಿಳಾಸ/ದೂರವಾಣಿ |
|---|---|---|---|---|
| | | | | |

ನಿಗಧಿತ ಸಮಯದಲ್ಲಿ ತಾವುಗಳು ವಿವರಗಳನ್ನು ನೀಡಿದಲ್ಲಿ ವಸತಿ ಸೌಲಭ್ಯ ಒದಗಿಸಲು ಅನುಕೂಲವಾಗಲಿದೆ, ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ತುರ್ತು ಸಂದರ್ಭಗಳಲ್ಲಿ ಸಂಬಂಧಪಟ್ಟವರನ್ನು ಸಂಪರ್ಕಿಸಲು ಸಹಾಯವಾಗುವಂತೆ ನಿಗಧಿತ ನಮೂನೆಯಲ್ಲಿ ಕಡ್ಡಾಯವಾಗಿ ಮಾಧ್ಯಮ ಪ್ರತಿನಿಧಿಗಳ ಸಂಪೂರ್ಣ ವಿವರ ಒದಗಿಸುವಂತೆ ತಿಳಿಸಿದೆ.

ಆಯುಕ್ತರು

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ಗೆ,

ಬೆಂಗಳೂರಿನಲ್ಲಿ ಕೇಂದ್ರಿಕೃತವಾಗಿರುವ ರಾಜ್ಯ ಹಾಗೂ ರಾಷ್ಟ್ರಮಟ್ಟದ ಮುದ್ರಣ ಮಾಧ್ಯಮದ ದಿನ ಪತ್ರಿಕೆಗಳು ಹಾಗೂ ವಿದ್ಯುನ್ಮಾನ ಮಾಧ್ಯಮದ ಉಪಗ್ರಹ ಸುದ್ದಿ ವಾಹಿನಿಗಳ ಮುಖ್ಯಸ್ಥರುಗಳಿಗೆ.

## ಮಾಧ್ಯಮ ಆಹ್ವಾನ

## Media Invitation

**ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ವತಿಯಿಂದ**
**ರಸಗೊಬ್ಬರ ಸಗಟು/ ಚಿಲ್ಲರೆ ಮಾರಾಟಗಾರರಿಗೆ 15 ದಿನಗಳ ಸಮಗ್ರ ತರಬೇತಿ ಹಾಗೂ**
**ಪೋಷಕಾಂಶಗಳ ನಿರ್ವಹಣೆ ತರಬೇತಿ ಕಾರ್ಯಕ್ರಮದ ಉದ್ಘಾಟನೆ:**

**ಉದ್ಘಾಟನೆ:**
**ಆರ್.ಶ್ರೀಧರ್**
ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಸಿಎಂಎಫ್, ಲಿ., ಬೆಂಗಳೂರು.

**ಮುಖ್ಯ ಅತಿಥಿಗಳು:**
ಸಿ.ಪಿಳ್ಳೇಗೌಡ
ಪ್ರಧಾನ ವ್ಯವಸ್ಥಾಪಕರು, ಕೆಎಸ್‌ಸಿಎಂಎಫ್ ಲಿ., ಬೆಂಗಳೂರು.

**ಅಧ್ಯಕ್ಷತೆ:**
ಡಾ.ಎನ್. ದೇವಕುಮಾರ್
ವಿಸ್ತರಣಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾಲಯ, ಜಿಕೆವಿಕೆ, ಬೆಂಗಳೂರು.

ದಿನಾಂಕ : 30–11–2021, ಮಂಗಳವಾರ, ಸಮಯ : ಬೆಳಿಗ್ಗೆ 11.00 ಗಂಟೆಗೆ

ಸ್ಥಳ : ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಸಮಾವೇಶ ಭವನ, ಜಿಕೆವಿಕೆ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

**PRESS RELEASE**

### ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ವಿವಿಧ ಕೋರ್ಸುಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಬೆಂಗಳೂರು ಪ್ರಾದೇಶಿಕ ಕೇಂದ್ರದಲ್ಲಿ ಪ್ರಸಕ್ತ 2021–22ನೇ ಜುಲೈ, ನವೆಂಬರ್ ಆವೃತ್ತಿ ಸಾಲಿಗೆ ಸ್ನಾತಕ/ ಸ್ನಾತಕೋತ್ತರ ಕೋರ್ಸುಗಳಾದ ಬಿ.ಎ, ಬಿ.ಕಾಂ, ಬಿ.ಬಿ.ಎ, ಬಿ.ಎಸ್ಸಿ, ಬಿ.ಲಿಬ್.ಐ.ಎಸ್ಸಿ, ಎಂ.ಎ, ಎಂ.ಕಾಂ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (ಎಂ.ಸಿ.ಜೆ), ಎಂ.ಲಿಬ್.ಐ.ಎಸ್ಸಿ, ಎಂ.ಎಸ್ಸಿ, ಎಂ.ಬಿ.ಎ, ಪಿ.ಜಿ.ಡಿಪ್ಲೊಮಾ, ಡಿಪ್ಲೊಮಾ ಹಾಗೂ ಸರ್ಟಿಫಿಕೇಟ್ ಪ್ರೋಗ್ರಾಮ್ಸ್‌ಗಳಿಗೆ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ದಂಡ ಶುಲ್ಕವಿಲ್ಲದೆ ಪ್ರಥಮ ವರ್ಷದ ಕೋರ್ಸುಗಳಿಗೆ ಡಿಸೆಂಬರ್ 10, 2021 ಕೊನೆಯ ದಿನಾಂಕವಾಗಿದೆ. ರೂ. 200/– ದಂಡ ಶುಲ್ಕದೊಂದಿಗೆ ಡಿಸೆಂಬರ್ 15, 2021 ಅಂತಿಮ ದಿನಾಂಕವಾಗಿರುತ್ತದೆ.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಮತ್ತು ಡಿಫೆನ್ಸ್ ಹಾಗೂ ಎಕ್ಸ್ ಸರ್ವೀಸ್ಮನ್ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಶೇಕಡಾ 15% ರಷ್ಟು ವಿನಾಯಿತಿ ನೀಡಲಾಗುವುದು.

ಅರ್ಹ ವಿದ್ಯಾರ್ಥಿಗಳು, ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ www.ksoumysuru.ac.in ಹಾಗೂ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ, ನಂ.61, 5ನೇ ಮುಖ್ಯ ರಸ್ತೆ, 5ನೇ ಅಡ್ಡ ರಸ್ತೆ, ಚಾಮರಾಜಪೇಟೆ, ಬೆಂಗಳೂರು–18, ಕಚೇರಿ ದೂರವಾಣಿ ಸಂಖ್ಯೆ: 080–26603664 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ –2021

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆಯನ್ನು ಡಿಸೆಂಬರ್ 07, 2021 ಅಪರಾಹ್ನ 4.30 ಗಂಟೆಗೆ ನಗರದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಮಾರಂಭವನ್ನು ಏರ್ಪಡಿಸಲಾಗಿದೆ.

ಘನವೆತ್ತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಸಶಸ್ತ್ರ ಪಡೆಗಳ ಧ್ವಜಗಳನ್ನು ಬಿಡುಗಡೆ ಮಾಡಲಿದ್ದು, ಕರ್ನಾಟಕ ರಾಜ್ಯ ಸೈನಿಕ ಮಂಡಳಿಯ ಅಧ್ಯಕ್ಷರೂ ಹಾಗೂ ರಾಜ್ಯದ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಸಮಾರಂಭದಲ್ಲಿ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು, ಸೈನ್ಯದ ವರಿಷ್ಠ ನಿವೃತ್ತ ಅಧಿಕಾರಿಗಳು, ಉಚ್ಚ ಮಟ್ಟದ ನಾಗರಿಕ ಸೇವೆಯ ಹಾಗೂ ಸೈನ್ಯದ ಅಧಿಕಾರಿಗಳು ಭಾಗವಹಿಸುವರು. ಈ ಸಂದರ್ಭದಲ್ಲಿ ಧ್ವಜ ನಿಧಿಗೆ ಅತಿ ಹೆಚ್ಚು ನಿಧಿ ಸಂಗ್ರಹಿಸಿದ ಜಿಲ್ಲೆಗೆ ಪಾರಿತೋಷಕ ನೀಡಲಾಗುವುದು. ಅರ್ಹ ಜಿಲ್ಲೆಗಳಿಗೆ ಹಾಗೂ ಇಲಾಖೆಗಳಿಗೆ ಪ್ರೋತ್ಸಾಹಕ ಪ್ರಶಸ್ತಿಗಳನ್ನು ಸಹ ವಿತರಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರಾಜ್ಯಮಟ್ಟದ ಚಿತ್ರಕಲಾ ಪ್ರದರ್ಶನ, ಸ್ಪರ್ಧೆ, ಕಾರ್ಯಾಗಾರ ಸಂವಾದ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪಿ.ಆರ್. ತಿಪ್ಪೇಸ್ವಾಮಿ ಪ್ರತಿಷ್ಠಾನ ಮೈಸೂರು ಇವರ ಸಂಯುಕ್ತಾಶ್ರಯದಲ್ಲಿ ರಾಜ್ಯಮಟ್ಟದ ಚಿತ್ರಕಲಾ ಪ್ರದರ್ಶನ, ಸ್ಪರ್ಧೆ, ಕಾರ್ಯಾಗಾರ ಸಂವಾದ ಕಾರ್ಯಕ್ರಮವನ್ನು ದಿನಾಂಕ: 30–11–2021ರಿಂದ 02–12–2021ರ ವರೆಗೆ ಮೂರು ದಿನಗಳ ಕಾಲ ಚಿಕ್ಕಮಗಳೂರಿನ ಶಾಂತಿನಿಕೇತನ ಚಿತ್ರಕಲಾ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದೆ.

ವಿಶೇಷವಾಗಿ ನಾಡಿನ ಹಿರಿಯ ಕಲಾವಿದರುಗಳು ಹಾಗೂ ಶಿಲ್ಪಿಗಳು, ಜನಪದ ತಜ್ಞರು, ವಿದ್ವಾಂಸರುಗಳು, ಆಗಮಿಸಿ ಕಲಾ ಪ್ರದರ್ಶನ ಸಂವಾದ, ಚರ್ಚೆ, ಉಪನ್ಯಾಸ ಪ್ರಾತ್ಯಕ್ಷಿಕೆಗಳು ಮುಂತಾದ ಹತ್ತು ಹಲವು ಕಾರ್ಯಕ್ರಮಗಳು ಆಯೋಜಿಸಲಾಗಿದ್ದು, ರಾಜ್ಯದ ವಿವಿದೆಡೆಯಿಂದ ಕಲಾವಿದರುಗಳು ಭಾಗವಹಿಸುತ್ತಿದ್ದಾರೆ.

ಪ್ರಮುಖವಾಗಿ ಪ್ರದಾನಮಂತ್ರಿ ನರೇಂದ್ರಮೋದಿಯವರಿಗೆ ಪ್ರಿಯವಾದ ರಾಮನನ್ನು ರಚಿಸಿದ ಶಿಲ್ಪಿ ರಾಮಮೂರ್ತಿರವರು ಹಾಗೂ ರಾಷ್ಟ್ರಪ್ರಶಸ್ತಿ ಪುರಸ್ಕೃತ ಕಲಾವಿದರಾದ ಕಾಂತರಾಜು, ಸೈಯದ್ ಆಸಿಪ್ ಅಲಿ ಅವರು ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆ ನೀಡಲಿದ್ದಾರೆ.

ರಾಜ್ಯದ ಇಬ್ಬರು ಹೆಸರಾಂತ ಕಲಾವಿದರಿಗೆ ಈ ಬಾರಿ ಪಿ.ಆರ್.ಟಿ. ಗೌರವ ರಾಜ್ಯ ಪ್ರಶಸ್ತಿ ನೀಡಲಾಗುತ್ತಿದೆ. ಒಟ್ಟು 3 ದಿನಗಳ ಕಾಯಕ್ರಮದಲ್ಲಿ ಕಲಾ ಪ್ರದರ್ಶನಗಳು ಆಯೋಜನೆಗೊಂಡಿದ್ದು, ಕಲಾಸಕ್ತರು ಹಾಗೂ ಮಂತ್ರಿ ಮಹೋದಯರುಗಳು ಆಗಮಿಸಿ ಪ್ರಶಸ್ತಿ ಕಾರ್ಯಕ್ರಮ ನಡೆಸಿಕೊಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಿಧಾನಸಭೆಯ ಸಭಾಧ್ಯಕ್ಷರಿಂದ ಪತ್ರಿಕಾಗೋಷ್ಠಿ

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ 2021, ಡಿಸೆಂಬರ್ 13 ರಿಂದ ಡಿಸೆಂಬರ್ 24 ರವರೆಗೆ ನಡೆಯಲಿರುವ ವಿಧಾನಸಭೆ ಅಧಿವೇಶನದ ಹಿನ್ನೆಲೆಯಲ್ಲಿ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಡಿಸೆಂಬರ್ 02 ರಂದು ಅಪರಾಹ್ನ 12.00 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿಯನ್ನು ಹಮ್ಮಿಕೊಂಡಿದ್ದಿ, ಮಾಧ್ಯಮ ಮಿತ್ರರು ಪತ್ರಿಕಾ ಗೋಷ್ಠಿಯಲ್ಲಿ ಭಾಗವಹಿಸುವಂತೆ ಕರ್ನಾಟಕ ವಿಧಾನ ಸಭೆಯ ಕಾರ್ಯದರ್ಶಿಗಳಾದ ಶ್ರೀಮತಿ ಎಂ.ಕೆ. ವಿಶಾಲಾಕ್ಷಿ ಅವರು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## “ಸಮಗ್ರ ಪೋಷಕಾಂಶಗಳ ನಿರ್ವಹಣೆ” 15 ದಿನಗಳ ತರಬೇತಿ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ಸಿಬ್ಬಂದಿ ತರಬೇತಿ ಘಟಕ, ವಿಸ್ತರಣಾ ನಿರ್ದೇಶನಾಲಯ ಮ್ಯಾನೇಜ್, ಹೈದರಾಬಾದ್, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ನಿಯಮಿತ, ಬೆಂಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿಯಮಿತ, ಮಂಗಳೂರು ಇವರುಗಳ ಸಂಯುಕ್ತ ಆಶ್ರಯದಲ್ಲಿ “ಸಮಗ್ರ ಪೋಷಕಾಂಶಗಳ ನಿರ್ವಹಣೆ” 15 ದಿನಗಳ ತರಬೇತಿ ಕಾರ್ಯಕ್ರಮವನ್ನು ರಸಗೊಬ್ಬರ ಸಗಟು/ಚಿಲ್ಲರೆ ಮಾರಾಟಗಾರರಿಗೆ ಹಮ್ಮಿಕೊಳ್ಳಲಾಗಿದೆ.

ಸಮಾರಂಭವು ದಿನಾಂಕ 30ನೇ ನವೆಂಬರ್ 2021ನೇ ಮಂಗಳವಾರ ಬೆಳಿಗ್ಗೆ 11–00 ಗಂಟೆಗೆ, ನಗರದ ಕೃಷಿ ವಿಶ್ವವಿದ್ಯಾನಿಲಯದ ಜಿಕೆವಿಕೆಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಸಮಾವೇಶ ಭವನದಲ್ಲಿ ಜರುಗಲಿದೆ.

ಆರ್. ಶ್ರೀಧರ್, ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಸಿಎಂಎಫ್, ಲಿ., ಬೆಂಗಳೂರು ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ, ಸಿ. ಪಿಳ್ಳೇಗೌಡ, ಪ್ರಧಾನ ವ್ಯವಸ್ಥಾಪಕರು, ಕೆಎಸ್‌ಸಿಎಂಎಫ್ ಲಿ., ಬೆಂಗಳೂರು ರವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ॥ ಎನ್. ದೇವಕುಮಾರ್, ವಿಸ್ತರಣಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ರವರು ವಹಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ನವೆಂಬರ್ 29 (ಕರ್ನಾಟಕ ವಾರ್ತೆ):

**ದಿನಾಂಕ: 29.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | * | * | * |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 61 | ತೃಪ್ತಿಕರ | $NO_2$ |
| 3 | ಕವಿಕ, ಮೈಸೂರುರಸ್ತೆ | 71 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 38 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | * | * | * |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 81 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 56 | ತೃಪ್ತಿಕರ | $PM_{10}$ |
| **(29.11.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 52 | ತೃಪ್ತಿಕರ | $NO_2$ |
| 9 | ಪೀಣ್ಯ | 60 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 62 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 29.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | * | * | * |
| 2 | Jayanagar 5th Block, Shalini ground | 61 | Satisfactory | $NO_2$ |
| 3 | KAVIKA, Mysore Road | 71 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 38 | Good | CO |
| 5 | HSR Layout, near Central Silkboard | * | * | * |
| 6 | City Railway Station, Magestic, Bengaluru | 81 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 56 | Satisfactory | $PM_{10}$ |
| **(29.11.2021 at 11.05 AM)** | | | | |
| 8 | BWSSB, Kadabesanahalli | 52 | Satisfactory | $NO_2$ |
| 9 | Peenya | 60 | Satisfactory | $PM_{2.5}$ |
| 10 | BTM Layout | 62 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older adults | Severe (>401) | Respiratory effects even on healthy people |